ಮಾಂಗಲ್ಯ ಭಾಗ್ಯ ಫಲಾನುಭವಿಗಳಿಗೆ ಹಣ ದೊರಕದಿರುವುದು.

268(462)

ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನಲ್ಲಿ ಮಾಂಗಲ್ಯ ಭಾಗ್ಯ ಯೋಜನೆಯಲ್ಲಿ ಹಣ ಇಲ್ಲದೆ 61 ಫಲಾನುಭವಿಗಳಿಗೆ ಮಂಜೂರಾತಿ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; (ತಲಾ ರೂ.5000-00)

ಆ) ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಬಂದಿದೆ.

ಆ) ಪ್ರಸಕ್ತ ಸಾಲಿನಲ್ಲಿ ಮಾಂಗಲ್ಯ ಭಾಗ್ಯ ಯೋಜನೆಯಡಿಯಲ್ಲಿ ಕುಂದಾಪುರ ತಾಲ್ಲೂಕಿನಲ್ಲಿ 69 ಅರ್ಜಿಗಳ ಪೈಕಿ 24 ಫಲಾನುಭವಿಗಳಿಗೆ ತಲಾ ರೂ. 5,000-00 ಗಳಂತೆ ಸಹಾಯಧನ ಮಂಜೂರು ಮಾಡಲಾಗಿದೆ. ಉಳಿದ ಅರ್ಜಿಗಳನ್ನು ಪರಿಶೀಲಿಸಿ ಸಹಾಯಧನವನ್ನು ಸಧ್ಯದಲ್ಲಿಯೇ ಬಿಡುಗಡೆ ಮಾಡಲಾಗುವುದು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಈಜುಕೊಳ ನಿರ್ಮಿಸುವ ಕುರಿತು.

269(226)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ರಾಷ್ಟ್ರ ಮಟ್ಟದ ಈಜುಕೊಳ ಇರಲಾರದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಕೈಗೊಂಡ ಕ್ರಮವೇನು?

ಇ) ಸದರಿ ಈಜುಕೊಳ ಪ್ರಾರಂಭಿಸಲಿಕ್ಕೆ ಎಷ್ಟು ಎಕರೆ ಭೂಮಿ ಕಾಯ್ದಿರಿಸಲಾಗಿದೆ?

ಈ) ಸದರಿ ಕೆಲಸಕ್ಕಾಗಿ ಎಷ್ಟು ಹಣ ಮೀಸಲಿಡಲಾಗಿದೆ?

ಉ) ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಹೌದು.

ಆ, ಇ, ಈ ಮತ್ತು ಉ) ಹುಬ್ಬಳ್ಳಿ - ಧಾರವಾಡ ಅವಳಿ ನಗರಗಳಲ್ಲಿ ಎರಡು ಈಜು ಕೊಳಗಳಿದ್ದು ಒಂದು ಧಾರವಾಡದಲ್ಲಿ ಹಾಗೂ ಇನ್ನೊಂದು ಹುಬ್ಬಳ್ಳಿಯಲ್ಲಿದೆ. ಹುಬ್ಬಳ್ಳಿಯಲ್ಲಿರುವ ಈಜು ಕೊಳವನ್ನು ಯುವಜನ ಹಾಗೂ ಕ್ರೀಡಾ ಪ್ರಾಧಿಕಾರಕ್ಕೆ ವಹಿಸಲಾಗಿದೆ. ಆದರೂ ರಾಷ್ಟ್ರ ಮಟ್ಟದ ಈಜು ಕೊಳವನ್ನು ಮಾಡುವ ಬಗ್ಗೆ ಪರಿಶೀಲಿಸಲು ಹುಬ್ಬಳ್ಳಿ-ಧಾರವಾಡ ಪ್ರಾಧಿಕಾರಕ್ಕೆ 5 ಎಕರೆಗಳ ಜಮೀನನ್ನು ನೀಡಲು ಕೋರಲಾಗಿದೆ. ಆದರೆ ಇದಕ್ಕಾಗಿ ಹಣವನ್ನು ಮೀಸಲಾಗಿ ಇಟ್ಟಿಲ್ಲ.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ಕುರಿತು.

270(228)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್, (ಹುಬ್ಬಳ್ಳಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲಾನ್ ತಯಾರಿಸಲಾಗಿದೆಯೇ?

ಆ) ಸದರಿ ಮಾಸ್ಟರ್ ಪ್ಲಾನ್ ಪ್ರಕಾರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಒಟ್ಟು ಎಷ್ಟು ಹಣ ಬೇಕಾಗುತ್ತದೆ?

ಇ) ಮಾಸ್ಟರ್ ಪ್ಲಾನ್ ಸಿದ್ಧಗೊಳಿಸಿದ್ದಲ್ಲಿ ಪ್ರಗತಿಯ ಕಾರ್ಯ ಯಾವ ವರ್ಷದಿಂದ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು):

ಅ) ಇಲ್ಲ.